**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2022-23ನೇ ಸಾಲಿನಿಂದ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಸಹಕಾರ ಇಲಾಖೆಯಿಂದ ಮರು ಜಾರಿಗೊಳಿಸುವ ಬಗ್ಗೆ.

**ಉಲ್ಲೇಖ:**
1. 2022-23ನೇ ಸಾಲಿನ ಅಯವ್ಯಯ ಭಾಷಣದ ಕಂಡಿಕೆ 67ರಲ್ಲಿನ ಘೋಷಣೆ.
2. ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್ಎಸ್ 2022, ಬೆಂಗಳೂರು, ದಿನಾಂಕ:30-03-2022.
3. ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್ ನೋಂದಣಿ ಸಂಖ್ಯೆ: GAN-4-00312-2022-23,ದಿ:23-09-2022.

***

**ಪ್ರಸ್ತಾವನೆ :**

2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಯಶಸ್ವಿನಿ ಯೋಜನೆಯನ್ನು ರಾಜ್ಯದಲ್ಲಿ ಮರು ಜಾರಿಗೊಳಿಸಲು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರ. ಸಂ. (2)ರ ಸರ್ಕಾರದ ಆದೇಶದಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ **"ಯಶಸ್ವಿನಿ"** ಯೋಜನೆಯನ್ನು ಪರಿಷ್ಕರಿಸಿ ಮರು ಜಾರಿಗೊಳಿಸಿ ಅನುಷ್ಠಾನಗೊಳಿಸಲು ಸರ್ಕಾರವು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಹಿಂದೆ ಸಹಕಾರ ಇಲಾಖೆಯಲ್ಲಿ ಯಶಸ್ವಿನಿ ಯೋಜನೆಯನ್ನು 2003 ರಲ್ಲಿ ಪ್ರಾರಂಭಿಸಿದ್ದು, 2003-04 ರಿಂದ 2017-18ರವರೆಗೆ ಜಾರಿಯಲ್ಲಿದ್ದು ನಂತರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ವರ್ಗಾವಣೆಗೊಂಡಿದ್ದು, ದಿ:31-05-2018 ರಿಂದ ಈ ಯೋಜನೆಯು ಸ್ಥಗಿತಗೊಂಡಿದ್ದು, ದಿನಾಂಕ:01-06-2018 ರಿಂದ ಆರೋಗ್ಯ ಕರ್ನಾಟಕ ಯೋಜನೆಯೊಂದಿಗೆ ವಿಲೀನಗೊಂಡಿರುತ್ತದೆ.

ರಾಜ್ಯದೆಲ್ಲೆಡೆ ಸಹಕಾರಿಗಳ ಮತ್ತು ರೈತರ ನಿರಂತರ ಬೇಡಿಕೆಯಂತೆ ರಾಜ್ಯ ಸರ್ಕಾರವು 2022-23ನೇ ಸಾಲಿನ ಆಯವ್ಯಯದಲ್ಲಿ ಯಶಸ್ವಿನಿ ಯೋಜನೆಯನ್ನು ಪರಿಣಾಮಕಾರಿಯಾಗಿ ರೂಪಿಸಿ ಮರುಜಾರಿಗೊಳಿಸಲು ತೀರ್ಮಾನಿಸಿ ರೂ.300/- ಕೋಟಿ ಆಯವ್ಯಯದ ಅವಕಾಶ ಕಲ್ಪಿಸಿ ಯೋಜನೆಯನ್ನು ಘೋಷಿಸಿದೆ.

ಯಶಸ್ವಿನಿ ಯೋಜನೆಯು ಸಹಕಾರ ಸಂಘಗಳ ಸದಸ್ಯರ ಅನುಕೂಲಕ್ಕಾಗಿ ಜಾರಿಗೊಂಡಿರುವ ಯೋಜನೆಯಾಗಿದ್ದು, ಇದನ್ನು ಸಹಕಾರ ಇಲಾಖೆಯಿಂದ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್ಎಸ್ 2022, ಬೆಂಗಳೂರು, ದಿನಾಂಕ: 12-10-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿ ಘೋಷಿಸಿರುವಂತೆ ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ, ಸಹಕಾರ ಇಲಾಖೆಯಿಂದ ಮರು ಜಾರಿಗೊಳಿಸಿ ಆದೇಶಿಸಿದೆ.

ಈ ಯೋಜನೆಯನ್ನು ಓದಲಾದ ಕ್ರ.ಸಂ.(3)ರಲ್ಲಿ ಈ ಉದ್ದೇಶಕ್ಕಾಗಿ ನೋಂದಣಿಯಾಗಿರುವ **"ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್"** ಮೂಲಕ ಅನುಷ್ಠಾನಗೊಳಿಸಲಾಗುವುದು. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ ಇವರು ಟ್ರಸ್ಟನ ಅಧ್ಯಕ್ಷರಾಗಿರುತ್ತಾರೆ.

2022-23ನೇ ಸಾಲಿಗೆ ಸಂಬಂಧಿಸಿದಂತೆ ಯಶಸ್ವಿನಿ ಯೋಜನೆಯಡಿ ಸದಸ್ಯತ್ವ ನೋಂದಣಿ ಪ್ರಕ್ರಿಯೆಯನ್ನು ದಿನಾಂಕ: 01-11-2022 ರಿಂದ ಪ್ರಾರಂಭಿಸಲಾಗುವುದು. ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗಿದೆ.

...2

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 03-10-2022 ರಂದು ಅನುಮೋದಿಸಿರುವಂತೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

12/10/22

(ಎ.ಸಿ. ದಿವಾಕರ್)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

12-10-22

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 250 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು:**

1. ಸರ್ಕಾರದ ಮುಖ್ಯಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು.
11. ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಅಧ್ಯಕ್ಷರು/ ವ್ಯವಸ್ಥಾಪಕ ನಿರ್ದೇಶಕರುಗಳು.
12. ರಾಜ್ಯದ ಸಹಕಾರ ಸಂಘಗಳ ಪ್ರಾಂತೀಯ ಜಂಟಿ ನಿಬಂಧಕರುಗಳು ಬೆಂಗಳೂರು/ ಮೈಸೂರು/ ಬೆಳಗಾವಿ/ ರಾಯಚೂರು.
13. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಜಿಲ್ಲಾ ಉಪನಿಬಂಧಕರುಗಳು.
14. ರಾಜ್ಯದ ಎಲ್ಲಾ ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು.
15. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾದಿಕಾರಿಗಳು.
17. ವಿಶೇಷ ಕರ್ತವ್ಯಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಸಹಕಾರ ಇಲಾಖೆ.
18. ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟನ ಎಲ್ಲಾ ಟ್ರಸ್ಟಿಗಳು.
19. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್.

ನಿಬಂಧಕರ ಮೂಲಕ

***